RNU AIR DHARWAD

AUGUST 04, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದಲ್ಲಿ, ರಸಗೊಬ್ಬರದ ಸಕಾಲಿಕ ಲಭ್ಯತೆಯ, ಕೊರತೆ ಕುರಿತು, ರಾಜ್ಯ ಸಂಸದರ ನಿಯೋಗ, ಕೇಂದ್ರ ರಸಗೊಬ್ಬರ ಖಾತೆ ಸಚಿವ ಜೆ.ಪಿ.ನಡ್ಡಾ ಅವರನ್ನು ಹೊಸ ದಿಲ್ಲಿಯಲ್ಲಿ ಭೇಟಿ ಮಾಡಿ, ಸಮಾಲೋಚಿಸಿದೆ ಎಂದು, ಬೆಂಗಳೂರು ಗ್ರಾಮಾಂತರ ಸಂಸದ ಸಿ.ಎನ್. ಮಂಜುನಾಥ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆ ಮದ್ದೂರಿನಲ್ಲಿ ಮಾತನಾಡಿದ ಅವರು, ರಾಜ್ಯಕ್ಕೆ ಕೇಂದ್ರ ಪೂರೈಸಬೇಕಾದ, 8 ದಶಾಂಶ 5 ಲಕ್ಷ ಮೆಟ್ರಿಕ್ ಟನ್ ಯೂರಿಯಾ, ಡಿ.ಎ.ಪಿ. ರಸಗೊಬ್ಬರ ರೈತರಿಗೆ ಪೂರೈಕೆಯಾಗಿದೆ. 1 ದಶಾಂಶ 3-5 ಲಕ್ಷ ಮೆಟ್ರಿಕ್ ಟನ್ ರಾಜ್ಯದ ಹೆಚ್ಚುವರಿ ಬೇಡಿಕೆ ಇದೆ. ಪ್ರತಿ ದಿನ 16 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಪೂರೈಕೆ ಮಾಡಲಾಗುತ್ತಿದೆ ಎಂದರು. ರಸಗೊಬ್ಬರ ಕೊರತೆ ಸಮಸ್ಯೆ ಸರಿಪಡಿಸಲು, ರಾಜ್ಯ ಸರ್ಕಾರ, ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಕಟ್ಟುನಿಟ್ಟಾಗಿ ನಿಯಂತ್ರಿಸಿ, ರೈತರ ಹಿತ ಕಾಯಬೇಕು ಎಂದರು.**

<><><>

**ಹುಬ್ಬಳ್ಳಿಯಲ್ಲಿ ಮಾತನಾಡಿದ, ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ, ಪ್ರಲ್ಹಾದ ಜೋಶಿ, ಪ್ರಸಕ್ತ ವರ್ಷದಲ್ಲಿ, ಇಲ್ಲಿಯ ತನಕ, ರಾಜ್ಯದಲ್ಲಿ 6 ದಶಾಂಶ 5-5 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಮಾರಾಟವಾಗಿದೆ. ಪ್ರಸ್ತುತ 1 ದಶಾಂಶ 9-4 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ. ಲಭ್ಯವಿರುವ ರಸಗೊಬ್ಬರವನ್ನು ಸಮರ್ಪಕವಾಗಿ ವಿತರಿಸಲು, ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದರು.**

<><><>

**ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು. ನಗರದ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ, ವಿಜಯ ಮಹಾಂತ ಎಜುಕೇಶನಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾದ, ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಆನ್ ಲೈನ್ ಗೀಳಿನಿಂದ ಹೊರಬಂದು, ಕ್ರೀಡೆ ಹಾಗೂ ಯೋಗಾಭ್ಯಾಸದಂತಹ ಉತ್ತಮ ಹವ್ಯಾಸಗಳನ್ನು ಯುವ ಸಮೂಹ ಮೈಗೂಡಿಸಿಕೊಳ್ಳಬೇಕಿದೆ ಎಂದರು.**

<><><>

**ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಜೀವನ ಜ್ಯೋತಿ, ಜೀವನ ಸುರಕ್ಷಾ ಹಾಗೂ ಅಟಲ್ ಪಿಂಚಣಿ ಯೋಜನೆ ಕುರಿತು, ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲೂಕು ಅದನೂರು ಗ್ರಾಮ ಪಂಚಾಯಿತಿಯಲ್ಲಿ, ಜನ ಜಾಗೃತಿ ಅಭಿಯಾನ ಜರುಗಿತು. ಆರ್ಥಿಕ ಸೇರ್ಪಡೆ ಅಭಿಯಾನದಲ್ಲಿ ಪಾಲ್ಗೊಂಡಿದ್ದ, ಅದನೂರು ಗ್ರಾಮ ಪಂಚಾಯಿತಿ, ಪಶು ಸಖಿ, ತ್ರಿವೇಣಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.**

<><><>

ಧ್ವನಿ: ತ್ರಿವೇಣಿ 33 ಸೆಕೆಂದುಗಳು

<><><>

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಅವರು, ಹುಬ್ಬಳ್ಳಿಯಲ್ಲಿ, ಆದ್ಯಾ ಅನಿಮ್ಯಾಟಿಕ್ಸ್ ನಿರ್ದೇಶಕ ರತ್ನ ಕುಮಾರ್ ಜಿ.ಕೆ ಅವರು ನಿರ್ಮಿಸಿದ 'ತಿರಂಗಾ' ಕಿರುಚಿತ್ರವನ್ನು ಬಿಡುಗಡೆಗೊಳಿಸಿದರು.

<><><>

ನಿರಂತರ ಪರಿಶ್ರಮ , ಪ್ರಾಮಾಣಿಕ ಪ್ರಯತ್ನಗಳ ಮೂಲಕ ಯುವ ಕ್ರೀಡಾಪಟುಗಳು ಸಾಧನೆಯ ಹಾದಿಯಲ್ಲಿ ಮುನ್ನಡೆಯಬೇಕು ಎಂದು ಧಾರವಾಡ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಿ. ಯತೀಶ್ ಕುಮಾರ ಹೇಳಿದರು. ಧಾರವಾಡದ ಆರ್.ಎನ್ ಶೆಟ್ಟಿ ಕ್ರೀಡಾಂಗಣದಲ್ಲಿ ಆಯೋಜಿತ, ವೃತ್ತ ಮಟ್ಟದ ಅರಣ್ಯ ಕ್ರೀಡಾಕೂಟ –2025 ಉದ್ಘಾಟಿಸಿ ಅವರು ಮಾತನಾಡಿದರು. ಸಾಧನೆಗೆ ಅಸಾಧ್ಯವಾದುದು ಯಾವುದೂ ಇಲ್ಲ, ಮಾನಸಿಕ ಹಾಗೂ ದೈಹಿಕವಾಗಿ ಸುದೃಢಗೊಳಿಸುವ ಕ್ರೀಡೆಯನ್ನು ಎಲ್ಲರೂ ಜೀವನದ, ಭಾಗ ವಾಗಿಸಬೇಕು ಎಂದರು. ಗದಗ, ಹಾವೇರಿ ಹಾಗೂ ಧಾರವಾಡ ಜಿಲ್ಲಾ ತಂಡಗಳು ಪಾಲ್ಗೊಂಡಿವೆ. ಕಾರ್ಯಕ್ರಮದಲ್ಲಿ  ಅಂತಾರಾಷ್ಟ್ರೀಯ ಕ್ರೀಡಾಪಟುಗಳಾದ ಅದಿತಿ ಕ್ಷಾತ್ರತೇಜ ಹಾಗೂ ಸ್ವಯಂ ಕಠಾರೆ ಅವರನ್ನು ಸನ್ಮಾನಿಸಲಾಯಿತು.

<><><>

ಬೀದರ್ ಜಿಲ್ಲೆಯಲ್ಲಿ 2025 ಕೋಟಿ ರೂಪಾಯಿ ವೆಚ್ಚದ, ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸಿದ್ದು, ಪ್ರಗತಿಯಲ್ಲಿರುವ ಯೋಜನೆಗಳ ಗುಣಮಟ್ಟದ ಬಗ್ಗೆ ನಿಗಾ ವಹಿಸುವಂತೆ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ, ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ, ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಾಲಾ ಕಟ್ಟಡಗಳ ದುರಸ್ಥಿ ಕಾರ್ಯದೊಂದಿಗೆ, ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಫಲಿತಾಂಶ ಸುಧಾರಣೆ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದರು.

<><><>

ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲೂಕು, ಹುಣಸನಹಳ್ಳಿ ಗ್ರಾಮದ ರಸಗೊಬ್ಬರ ಮಳಿಗೆಯಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಅಪಾರ ಪ್ರಮಾಣದ ಗೊಬ್ಬರ ಹಾಗೂ ಕೀಟನಾಶಗಳು ಬೆಂಕಿಗೆ ಆಹುತಿಯಾಗಿವೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>